**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹುಣಸೂರು**

**ಸಿಸಿ ನಂ.241/2024**

**ಫಿರ್ಯಾದುದಾರರುಃ** ಶ್ರೀ ಗಣೇಶ್.ಟಿ.ಎಸ್. ಬಿನ್ ಶೇಖರೇಗೌಡ,
ವಯಸ್ಸು 35ವರ್ಷ, ವಾಸಃ ತಿಪ್ಪಲಪುರ ಗ್ರಾಮ,
ಕೊತ್ತೇಗಾಲ ಪೋಸ್ಟ್, ಗಾವಡಗೆರೆ ಹೋಬಳಿ,
ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ.

**– ವಿರುದ್ಧ –**

**ಆರೋಪಿಃ** ಶ್ರೀ ಚಂದ್ರಶೇಖರ್ ಬಿನ್ ಅಪ್ಪಣ್ಣ,
ವಯಸ್ಸು 30ವರ್ಷ, ವಾಸಃ ಹೆಮ್ಮಿಗೆ ಕಾಲೋನಿ,
ಹರೀನಹಳ್ಳಿ ಪೋಸ್ಟ್, ಹನಗೋಡು ಹೋಬಳಿ,
ಹುಣಸೂರು ತಾಲ್ಲೂಕು, ಮೈಸೂರು ಜಿಲ್ಲೆ.

**ದಂಡ ಪ್ರಕ್ರಿಯಾ ಸಂಹಿತೆಯ ಕಲಂ 313 ರ ಅಡಿಯಲ್ಲಿ ಆರೋಪಿಯ ಹೇಳಿಕೆ**

| | |
|---|---|
| ಪ್ರಶ್ನೆ 1: | ಫಿರ್ಯಾದುದಾರರಾದ ಗಣೇಶ್.ಟಿ.ಎಸ್.ರವರು ನಿಮ್ಮ ವಿರುದ್ಧ ಕೊಟ್ಟಿರುವ ಹೇಳಿಕೆಗಳನ್ನು ಕೇಳಿದ್ದೀರಾ? |
| ಉತ್ತರ: | ತಿಳಿದಿದೆ |
| ಪ್ರಶ್ನೆ 2: | ಪಿ.ಡಬ್ಲ್ಯೂ1 ಗಣೇಶ್.ಟಿ.ಎಸ್.ರವರು ತಮ್ಮ ಸಾಕ್ಷ್ಯದಲ್ಲಿ, ನೀವು ಮತ್ತು ಅವರು ಹಲವಾರು ವರ್ಷಗಳಿಂದ ಒಬ್ಬರಿಗೊಬ್ಬರು ಪರಿಚಯಸ್ಥರು ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |

| | |
|---|---|
| ಪ್ರಶ್ನೆ 3: | ಇದೇ ಸಾಕ್ಷಿಯು ಮುಂದುವರಿದು ತಮ್ಮ ಸಾಕ್ಷ್ಯದಲ್ಲಿ, ಸದರಿ ಪರಿಚಯದ ಆಧಾರದ ಮೇಲೆ ನೀವು ನಿಮ್ಮ ಕಾನೂನುಬದ್ಧ ಅವಶ್ಯಕತೆಗಾಗಿ ಅಂದರೆ ನಿಮ್ಮ ವ್ಯಾಪಾರದ ಅಭಿವೃದ್ಧಿಗಾಗಿ ಫೆಬ್ರವರಿ -2024ರಂದು ರೂ.3,00,000/-ಗಳನ್ನು ಮೂರು ತಿಂಗಳ ಒಳಗೆ ಮರುಪಾವತಿಸುವುದಾಗಿ ಹೇಳಿ ಸಾಲವಾಗಿ ಪಡೆದುಕೊಂಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ:4 | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಸಾಲದ ಮರುಪಾವತಿಗಾಗಿ ನೀವು 03.05.2024 ರ ದಿನಾಂಕ ನಮೂದಿಸಿದ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಹುಣಸೂರು ಶಾಖೆಯ ಚೆಕ್ ನಂ.593323 ಅನ್ನು ರೂ.3,00,000/- ಗಳಿಗೆ ನೀಡಿರುತ್ತೀರಿ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 5: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಸದರಿ ಚೆಕ್ ಅನ್ನು ಅವರು ತಮ್ಮ ಬ್ಯಾಂಕ್ ಆದ ಸ್ಟೇಟ್ ಬ್ಯಾಂಕ್ ಇಂಡಿಯಾ, ಕೃಷಿ ವಾಣಿಜ್ಯ ಬ್ಯಾಂಕ್, ಹುಣಸೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲ" ಎಂಬ |

| | |
|---|---|
| | ಕಾರಣಕ್ಕೆ ಸದರಿ ಚೆಕ್ ದಿನಾಂಕಃ 06.05.2024 ರಂದು ಬ್ಯಾಂಕಿನ ಹಿಂಬರಹದೊಂದಿಗೆ ವಾಪಾಸಾಗಿರುವುದಾಗಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 6: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಈ ಬಗ್ಗೆ ದಿನಾಂಕ 07.05.2024 ರಂದು ಅವರು ನಿಮಗೆ ತಮ್ಮ ವಕೀಲರ ಮೂಲಕ ನೊಂದಾಯಿತ ಅಂಚೆಯ ಮೂಲಕ ನೋಟೀಸ್ ನ್ನು ನೀಡಿದ್ದು, ಸದರಿ ನೋಟೀಸು ದಿನಾಂಕಃ 11.05.2024ರಂದು ನಿಮಗೆ ಖುದ್ದಾಗಿ ಜಾರಿಯಾಗಿದ್ದರೂ ಸಹ ನೀವು ಫಿರ್ಯಾದುದಾರರಿಗೆ ನೀಡಬೇಕಾದ ಚೆಕ್ಕಿನ ಹಣವನ್ನು ಉದ್ದೇಶಪೂರ್ವಕವಾಗಿ ಮರುಪಾವತಿಸಿಲ್ಲ ಹಾಗು ನೋಟೀಸುಗಳಿಗೆ ಉತ್ತರವನ್ನು ನೀಡಿರುವುದಿಲ್ಲ ಎಂದು ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 7: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆದರೂ ಸಹ ನೀವು ಈವರೆಗೂ ಸಾಲದ ಹಣವನ್ನು ಮರುಪಾವತಿಸದೆ ಇರುವುದರಿಂದ ನೆಗೋಶಿಯೆಬಲ್ ಇನ್ಸ್ಟುಮೆಂಟ್ಸ್ ಕಾಯಿದೆಯ ಕಲಂ 138ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧ ಎಸಗಿರುತ್ತೀರಿ ಎಂದು ಸಾಕ್ಷಿ |

| | |
|---|---|
| | ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 8: | ಇದೇ ಸಾಕ್ಷಿಯು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ ನೀವು ಅವರಿಗೆ ನೀಡಿದ ಚೆಕ್, ಬ್ಯಾಂಕಿನವರು ನೀಡಿದ ಹಿಂಬರಹ, ವಕೀಲರ ಮೂಲಕ ನೀಡಿದ ನೋಟೀಸಿನ ಕಚೇರಿ ಪ್ರತಿ, ಅಂಚೆ ರಶೀದಿ, ಅಂಚೆ ಸ್ವೀಕೃತಿ ಪತ್ರವನು ನಿಪಿ-1 ರಿಂದ ನಿಪಿ-5 ಎಂದು ಗುರುತಿಸಿ ಸಾಕ್ಷಿ ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಾ? |
| ಉತ್ತರ: | ಸುಳ್ಳು |
| ಪ್ರಶ್ನೆ 9: | ನಿಮಗೆ ಈ ಕೇಸಿನ ಬಗ್ಗೆ ಮತ್ತೆ ಏನಾದರೂ ಹೇಳುವುದು ಇದೆಯೇ? |
| ಉತ್ತರ: | ಇಲ್ಲ |
| ಪ್ರಶ್ನೆ 10: | ನಿಮ್ಮ ಪರವಾಗಿ ಸಾಕ್ಷಿ ವಿಚಾರಣೆ ಇದೆಯೇ? |
| ಉತ್ತರ: | ಇಲ್ಲ |

ಈ ಮೇಲ್ಕಂಡ ಹೇಳಿಕೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಮತ್ತು ಸರಿಯಾಗಿದೆಯೆಂದು ದೃಢೀಕರಿಸಿರುತ್ತೇನೆ.

ದಿನಾಂಕಃ 03.10.2025.

Sd/-

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**

**ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ